MSME

Scheme No. 13

## ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ : ಪ್ರಾದೇಶಿಕ ಅಸಮತೋಲನ ನಿವಾರಣೆ ಬಗೆಗಿನ ಡಾ : ಡಿ.ಎಂ. ನಂಜುಂಡಪ್ಪ ವರದಿ ಆಧಾರದ ಮೇಲೆ ಸರ್ಕಾರವು ರಾಜ್ಯದ ಅತ್ಯಂತ ಹಿಂದುಳಿದ, 39 ತಾಲ್ಲೂಕುಗಳನ್ನು ಕೈಗಾರಿಕೀಕರಣಗೊಳಿಸಲು [redacted] " ಎಂಬ ಹೊಸ ಯೋಜನೆಯನ್ನು ಅನಯಷ್ಠಾನಗೊಳಿಸಲು ವಿವಿಧ ಇಲಾಖೆಗಳಿಂದ ಸಮನ್ವಯ ಹಾಗೂ ಯೋಜನೆಗಳಿಗೆ ಮಂಜೂರಾತಿ ನೀಡಲು ಅನುಕೂಲವಾಗವಂತೆ ರಾಜ್ಯಮಟ್ಟದ ಎಂಪವರ್ಡ್ ಸಮಿತಿ ರಚಿಸುವ ಕುರಿತು.

ಓದಲಾಗಿದೆ : ಸರ್ಕಾರದ ಆದೇಶ ಸಂ.ವಾಕೈ 125 ಸಿಎಸ್‌ಸಿ 2005 ದಿನಾಂಕ : 18.4.2005

**ಪ್ರಸ್ತಾವನೆ :**

ಪ್ರಾದೇಶಿಕ ಅಸಮತೋಲನ ನಿವಾರಣೆಗೆ ರಚಿಸಿರುವ ಡಾ : ಡಿ.ಎಂ. ನಂಜುಂಡಪ್ಪ ಉನ್ನತ ಮಟ್ಟದ ಸಮಿತಿಯು ನೀಡಿರುವ ವರದಿ ಪ್ರಕಾರ ಸರ್ಕಾರವು ರಾಜ್ಯದ 14 ಜಿಲ್ಲೆಗಳಲ್ಲಿ 39 ತಾಲ್ಲೂಕುಗಳನ್ನು ಅತ್ಯಂತ ಹಿಂದುಳಿದ ತಾಲ್ಲೂಕುಗಳೆಂದು ಘೋಷಿಸಿದೆ. ಈ 39 ತಾಲ್ಲೂಕುಗಳಲ್ಲಿನ ಕೈಗಾರಿಕೀಕರಣಕ್ಕಾಗಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು " ಕೈಗಾರಿಕಾ ವಿಕಾಸ " ಎಂಬ ಹೊಸ ಯೋಜನೆಯನ್ನು 2005-06ನೇ ಸಾಲಿನಲ್ಲಿ ರೂಪಿಸಿದೆ. ಸದರಿ ಯೋಜನೆಯನ್ನು 2005-06 ರಿಂದ 2010-11 ರವರೆಗೆ ಅಂದರೆ 5 ವರ್ಷಗಳಲ್ಲಿ ಕಾರ್ಯಗತಗೊಳಿಸಬೇಕಾಗಿರುತ್ತದೆ. ಈ ಯೋಜನೆಯಡಿ ರೂ. 2,500/- ಲಕ್ಷಗಳನ್ನು 2005-06ನೇ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಅಯುವ್ಯಯದ ಲೆಕ್ಕ ಶೀರ್ಷಿಕೆ 2851-00-102-0-70ರಲ್ಲಿ ಹಂಚಿಕೆ ಮಾಡಿರುತ್ತದೆ.

ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿ ಗ್ರಾಮೀಣ ಕೈಗಾರಿಕೆಗಳನ್ನು ಹಾಗೂ ಕುಶಲಕರ್ಮಿಗಳ ಆಧಾರಿತ ಘಟಕಗಳನ್ನು ಪ್ರಾರಂಭಿಸಲು ಪ್ರೋತ್ಸಾಹ ನೀಡಿ, ಕೈಗಾರಿಕೆಗಳ ಬೆಳವಣಿಗೆಗೆ ಅನುಕೂಲಕರ ವಾತಾವರಣ ಕಲ್ಪಿಸಿ, ತಾಲ್ಲೂಕಿನ ಸಾಮಾಜಿಕ ಹಾಗೂ ಆರ್ಥಿಕ ಮಟ್ಟವನ್ನು ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಈ ಯೋಜನೆಯಡಿಯಲ್ಲಿ ಸ್ಥಳೀಯ ಸಂಪನ್ಮೂಲ ಆಧಾರಿತ, ಸ್ಥಳೀಯ ಕುಶಲತೆ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಕೈಗಾರಿಕಾ ಪ್ರದೇಶ, ಮಳಿಗೆ, ಅಡಚಣೆ ಇಲ್ಲದೆ ವಿದ್ಯುತ್‌ಚ್ಛಕ್ತಿ, ತರಬೇತಿ ಸೌಲಭ್ಯಗಳು, ಪ್ರತಿಯೊಂದು ತಾಲ್ಲೂಕಿನಲ್ಲಿ ಕನಿಷ್ಠ ಒಂದು ಬೃಹತ್ ಕೈಗಾರಿಕಾ ಘಟಕ, ಗುಂಪು ಕೈಗಾರಿಕಾ ಅಭಿವೃದ್ಧಿ, ರಿಯಾಯಿತಿ ಮತ್ತು ಪ್ರೋತ್ಸಾಹ ಹಾಗೂ ಮಾರುಕಟ್ಟೆ ಸೌಲಭ್ಯಗಳನ್ನು ಒದಗಿಸಲಾಗುತ್ತದೆ.

ಈ ಯೋಜನೆಯನ್ನು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ಸಂಬಂಧಪಟ್ಟ ಜಿಲ್ಲಾ ಕೈಗಾರಿಕಾ ಕೇಂದ್ರದ ಮೂಲಕ ಅನುಷ್ಠಾನಗೊಳಿಸಲಾಗುವುದು. ರಾಜ್ಯ ಸರ್ಕಾರವು ನಿರ್ದಿಷ್ಟ ಮಂಡಳಿ/ ನಿಗಮಗಳು, ನಬಾರ್ಡ್, ವಾಣಿಜ್ಯ ಬ್ಯಾಂಕುಗಳು, ಆರ್ಥಿಕ ಸಂಸ್ಥೆಗಳು, ಕೈಗಾರಿಕಾ ಸಂಘಗಳು, ಎನ್.ಜಿ.ಓ.ಗಳ ಸಮನ್ವಯದೊಂದಿಗೆ ಅನುಷ್ಠಾನಗೊಳಿಸಲಾಗುವುದು.

ಕೈಗಾರಿಕಾ ವಿಕಾಸ ಯೋಜನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಪಶುಸಂಗೋಪನೆ, ಆಹಾರ ಸಂಸ್ಕರಣೆ ಇಲಾಖೆ ಹಾಗೂ ಜವಳಿ ಇಲಾಖೆಗಳಲ್ಲಿ ಹಾಲಿ ಅಸ್ತಿತ್ವದಲ್ಲಿರುವ ಯೋಜನೆಗಳೊಂದಿಗೆ ಕೂಡಿಸಿ ಅನುಷ್ಠಾನಗೊಳಿಸಲಾಗುವುದು.

ಯೋಜನೆಯ ಕಾರ್ಯರೂಪ ಮತ್ತು ಅನುಷ್ಠಾನದ ಬಗ್ಗೆ ಸಲಹೆ ಸೂಚನೆ ನೀಡುವ ಮಾನ್ಯ ಭಾರಿ, ಮಧ್ಯಮ, ಸಣ್ಣ ಕೈಗಾರಿಕೆಗಳು ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯಮಟ್ಟದ ಸಮಿತಿಯನ್ನು ಹಾಗೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ:ಸಿಐ 125 ಸಿಎಸ್‌ಸಿ 2005, ದಿನಾಂಕ : 18.04.2005ರಲ್ಲಿ ರಚಿಸಲಾಗಿದೆ.

ಅಂತಹ ಇಲಾಖೆಗಳ ಸಮನ್ವಯ ಮತ್ತು ಸಹಕಾರದೊಂದಿಗೆ ಯೋಜನೆಗಳನ್ನು ಗುರುತಿಸಿ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಹಾಗೂ ಯೋಜನೆಗಳಿಗೆ ಅವಶ್ಯಕತೆಗೆ ತಕ್ಕಂತೆ ಅನುದಾನ ಮಂಜೂರಾತಿ, ಪಾಲುದಾರರ ಹೂಡಿಕೆ ಹಾಗೂ ರಾಜ್ಯ ಮಟ್ಟದಲ್ಲಿ ಮತ್ತು ಜಿಲ್ಲಾಮಟ್ಟದಲ್ಲಿ ನಿಯೋಜಿಸಿದ ಅಧಿಕಾರಿಗಳು ಅನುದಾನವನ್ನು ಉಪಯೋಗಿಸಿಕೊಂಡು ಯೋಜನೆಯನ್ನು ಅನುಷ್ಠಾನಗೋಳಿಸಲು ಅನುಕೂಲವಾಗುವಂತೆ ರಾಜ್ಯಮಟ್ಟದಲ್ಲಿ Empowered Committee ಯನ್ನು ಈ ಕೆಳಕಂಡಂತೆ ಸಮಿತಿ ರಚಿಸಿ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂ. ಸಿಐ 154 ಸಿಎಸ್‌ಸಿ 2005 ದಿನಾಂಕ : 08.12.2005**

ಡಾ : ಡಿ.ಎಂ. ನಂಜುಂಡಪ್ಪ ಸಮಿತಿಯ ವರದಿಯಂತೆ ಕೈಗಾರಿಕಾ ವಿಕಾಸ ಎಂಬ ಹೊಸ ಯೋಜನೆಯನ್ನು ರಾಜ್ಯದಲ್ಲಿ ಗುರುತಿಸಿರುವ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿ ವಿವಿಧ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಕಾರ್ಯನಿರ್ವಹಿಸಲು ಅಂತಹ ಇಲಾಖೆಗಳ ಸಮನ್ವಯ ಮತ್ತು ಸಹಕಾರದೊಂದಿಗೆ ಯೋಜನೆಗಳನ್ನು ಗುರುತಿಸಿ, ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಹಾಗೂ ಯೋಜನೆಗಳ ಅವಶ್ಯಕತೆಗೆ ತಕ್ಕಂತೆ ಅನುದಾನ ಮಂಜೂರಾತಿ, ಪಾಲುದಾರರ ಹೂಡಿಕೆ ಹಾಗೂ ರಾಜ್ಯ ಮಟ್ಟದಲ್ಲಿ ಮತ್ತು ಜಿಲ್ಲಾ ಮಟ್ಟದಲ್ಲಿ ನಿಯೋಜಿಸಿದ ಅಧಿಕಾರಿಗಳು ಅನುದಾನವನ್ನು ಉಪಯೋಗಿಸಿಕೊಂಡು ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ರಾಜ್ಯ ಮಟ್ಟದಲ್ಲಿ Empowered Committee ಯನ್ನು ಈ ಕೆಳಕಂಡಂತೆ ಸಮಿತಿ ರಚಿಸಿ ಆದೇಶಿಸಲಾಗಿದೆ.

| ಕ್ರ.ಸಂ. | ಇಲಾಖೆ ಮತ್ತು ಪದನಾಮ | ಅಧ್ಯಕ್ಷರು/ಸದಸ್ಯರ ನೇಮಕ |
|---|---|---|
| 01. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ | ಅಧ್ಯಕ್ಷರು |
| 02. | ಸರ್ಕಾರದ ಅಪರ ಕಾರ್ಯದರ್ಶಿ ಅಥವಾ ಅವರ ಪ್ರತಿನಿಧಿ, ಯೋಜನಾ ಇಲಾಖೆ | ಸದಸ್ಯರು |
| 03. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | ಸದಸ್ಯರು |
| 04. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ | ಸದಸ್ಯರು |

| | | |
|---|---|---|
| 05. | ಸರ್ಕಾರದ ಕಾರ್ಯದರ್ಶಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆ | ಸದಸ್ಯರು |
| 06. | ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ | ಸದಸ್ಯರು |
| 07. | ಸರ್ಕಾರದ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 08. | ಸರ್ಕಾರದ ಕಾರ್ಯದರ್ಶಿ, ಆಹಾರ ಸಂಸ್ಕರಣೆ ಇಲಾಖೆ | ಸದಸ್ಯರು |
| 09. | ಆಯುಕ್ತರು, ಜವಳಿ ಮತ್ತು ನಿರ್ದೇಶಕರು, ಕೈಮಗ್ಗ ಮತ್ತು ಜನಳಿ ಇಲಾಖೆ | ಸದಸ್ಯರು |
| 10. | ಸರ್ಕಾರದ ಕಾರ್ಯದರ್ಶಿ, ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| 11. | ಕೈಗಾರಿಕಾಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ | ಸದಸ್ಯ ಕಾರ್ಯದರ್ಶಿ |

Empowered Committee ಅಧಿಕಾರ ಮತ್ತು ಕರ್ತವ್ಯಗಳನ್ನು ಈ ಮುಂದಿನಂತೆ ನಿಗಧಿಪಡಿಸಿದೆ.

ಎ) ಈ ಯೋಜನೆಯನ್ನು ಅನುಷ್ಠಾನಗೊಳಿಸುವುದರಲ್ಲಿ ಅಂತಹ ಇಲಾಖಾ ಸಮನ್ವಯತೆ ಮತ್ತು ಸಹಕಾರವನ್ನು ಖಾತ್ರಿಪಡಿಸಿಕೊಳ್ಳುವುದು.

ಬಿ) ಅನುಷ್ಠಾನಗೊಳಿಸಬಹುದಾದಂತಹ ಕಾರ್ಯಕ್ರಮ ಮತ್ತು ಯೋಜನೆ (Project) ಗಳನ್ನು ಗುರುತಿಸುವುದು.

ಸಿ) ಕಾರ್ಯಕ್ರಮದ ಅಡಿಯಲ್ಲಿ ಪ್ರಸ್ತಾವನೆಗಳು/ಯೋಜನೆಗಳಿಗೆ ಹಣ ಒದಗಿಸುವ ಮಾದರಿಯನ್ನು ಅನುಮೋದಿಸುವುದು ; ಹಾಗೂ ಯೋಜನೆಗಳಿಗೆ ಸಹಾಯಧನ ನೀಡಬೇಕಾದ ಸಂದರ್ಭದಲ್ಲಿ ಒಟ್ಟು ಸಹಾಯಧನ ಮೊತ್ತ, ಪ್ರಮಾಣ ಮತ್ತು ಪಾಲು ಬಗ್ಗೆ ಸಮಿತಿಯ ಆರ್ಥಿಕ ಇಲಾಖೆಯ ಅನುಮೋದನೆ ಪಡಿಯುವುದು.

ಡಿ) ಮೂಲಭೂತ ಸೌಕರ್ಯಗಳನ್ನು ಬಲಪಡಿಸಲು ಅನುದಾನ:ಸಮಾನಭಾಗತ್ವವನ್ನು ಮಂಜೂರು ಮಾಡುವುದು ;

ಇ) ಯೋಜನೆ ಅನುಷ್ಠಾನಕ್ಕೆ ಅವಶ್ಯಕತೆಯಿರುವ ಅನುದಾನವನ್ನು ನಿರ್ವಹಿಸಲು ರಾಜ್ಯ ಮಟ್ಟದ/ ಜಿಲ್ಲಾಮಟ್ಟದ ಅಧಿಕಾರಿಗಳನ್ನು ಪ್ರತ್ಯಾಯೋಜಿಸಲು ಅನುಮತಿ ನೀಡುವುದು ;

ಎಫ್) ತರಬೇತಿ ಕಾರ್ಯಕ್ರಗಳಿಗೆ ಅನುಮೋದನೆ ನೀಡುವುದು, ತರಬೇತಿ ನೀಡುವ ಸಂಘಸಂಸ್ಥೆಗಳು ಮೂಲಭೂತ ಸೌಕರ್ಯಗಳನ್ನು ಬಲಪಡಿಸಲು ಮತ್ತು ತರಬೇತಿ ಸಂಸ್ಥೆಗಳಲ್ಲಿ ಬಂಡವಾಳ ಹೂಡಿಕೆ ಕುರಿತು ಪ್ರಸ್ತಾವನೆಗೆ ಅನಯಮೋದನೆ ;

ಜಿ) ಮಾರುಕಟ್ಟೆ ಸಮೀಕ್ಷೆ ಮತ್ತು ಉತ್ಪನ್ನ ಅಭಿವೃದ್ಧಿ ಇತ್ಯಾದಿಗಳ ಬಗ್ಗೆ ವಿಶೇಷ ಅಧ್ಯಯನ ಮಾಡಲು ನುರಿತ ಏಜೆನ್ಸಿಗಳು/ವ್ಯಕ್ತಿಗಳನ್ನು ಕೆ.ಟಿ.ಪಿ.ಪ. ಕಾಯ್ದೆ 2000ರ ಪ್ರಕಾರ ತೊಡಗಿಸುವುದು ;

ಹುದ್ದೆಗಳ ಸೃಜನೆ ಮತ್ತು ಮೇಲ್ದರ್ಜೆಗೇರಿಸುವ ಸಂಬಂಧ ಪ್ರಸ್ತಾವನೆ ಇದ್ದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಹಾಗೂ ಆರ್ಥಿಕ ಇಲಾಖೆಯ ಅನಯಮೋದನೆ ಪಡೆಯುವುದು;

ಡಾ : ಡಿ.ಎಂ. ನಂಜುಂಡಪ್ಪ ಸಮಿತಿಯ ವರದಿಯಂತೆ ಕೈಗಾರಿಕಾ ವಿಕಾಸ ಎಂಬ ಹೊಸ ಯೋಜನೆಯನ್ನು ರಾಜ್ಯದಲ್ಲಿ ಗುರುತಿಸಿರುವ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿ ವಿವಿಧ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಕಾರ್ಯನಿರ್ವಹಿಸಲು ಮೇಲ್ಕಂಡ ಎಲ್ಲಾ ಕಾರ್ಯನಿರ್ವಹಣೆಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯನ್ನು ನೋಡಲ್ ಏಜೆನ್ಸಿಯಾಗಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
ಸಹಿ
(ಎ.ಎಸ್. ಪಾರ್ವತಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸ.ಪ್ರ.ಕೈ.)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ